ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ:ಜಿಎಲ್13/160/ಸಾಮಾನ್ಯ-(02)/2023-24

ದಿನಾಂಕ.16.12.2025

## ಸುತ್ತೋಲೆ

ವಿಷಯ: ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಪ್ರತಿ ತಿಂಗಳು ಆಯೋಜಿಸುತ್ತಿರುವ **"ಮಾಸಿಕ ಸಂಶೋಧನಾ ವಿಶೇಷ ಉಪನ್ಯಾಸ ಮಾಲಿಕೆ"**ಯನ್ನು ಸದುಪಯೊಗ ಪಡೆದುಕೊಳ್ಳುವ ಬಗ್ಗೆ.

ಉಲ್ಲೇಖ: ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು ಇವರ ಪತ್ರದ ಸಂಖ್ಯೆ.KSHEC/156/Research Lecture Series/2023-24/919, ದಿನಾಂಕ.09.07.2025.

****

ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು ಇವರ ವತಿಯಿಂದ ಕಳೆದ ಜನವರಿ 2024ರಿಂದ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಪ್ರತಿ ತಿಂಗಳು ಒಂದೊಂದು ವಿಶ್ವವಿದ್ಯಾನಿಲಯದ ಸಹಯೋಗದೊಂದಿಗೆ **"ಮಾಸಿಕ ಸಂಶೋಧನಾ ವಿಶೇಷ ಉಪನ್ಯಾಸ ಮಾಲಿಕೆ"**ಯನ್ನು online ಮುಖಾಂತರ ನಡೆಸುತ್ತಿರುವುದು ಸರಿಯಷ್ಟೆ. ವಿಶ್ವವಿದ್ಯಾನಿಲಯಗಳಲ್ಲಿ ನಡೆಯುತ್ತಿರುವ ಹೊಸ ಸಂಶೋಧನಾದಾರಿತ ವಿಷಯಗಳಲ್ಲಿ ಪರಿಣಿತ/ವಿಷಯ ತಜ್ಞರು ಉಪನ್ಯಾಸ ನೀಡುತ್ತಿದ್ದಾರೆ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ ನಡೆಯುತ್ತಿರುವ ಹೊಸ ಸಂಶೋಧನೆಗಳನ್ನು ಹಂಚಿಕೊಳ್ಳುವುದು ಹಾಗೂ ಸಂಶೋಧನಾ ಚಟುವಟಿಕೆಗಳನ್ನು ಉತ್ತೇಜಿಸುವುದು ಇದರ ಉದ್ದೇಶವಾಗಿರುತ್ತದೆ ಎಂದು ಉಲ್ಲೇಖ ಪತ್ರದಲ್ಲಿ ತಿಳಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಪ್ರತಿ ತಿಂಗಳ ಕೊನೆಯ ವಾರದಲ್ಲಿ online ಮುಖಾಂತರ ನಡೆಯುವ **"ಮಾಸಿಕ ಸಂಶೋಧನಾ ವಿಶೇಷ ಉಪನ್ಯಾಸ ಮಾಲಿಕೆ"** ಕಾರ್ಯಕ್ರಮಕ್ಕೆ ಮೈಸೂರು ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಸ್ನಾತಕ/ಸ್ನಾತಕೋತ್ತರ ವಿಭಾಗಗಳ ಅಧ್ಯಾಪಕರು/ಸಂಶೋಧನಾ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಈ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಲು ತಿಳಿಸಲಾಗಿದೆ.

ಕುಲಸಚಿವರು
ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

**ಪ್ರತಿಗಳು:**

1. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ನಂ.30, ಪ್ರಸನ್ನಕುಮಾರ್ ಬ್ಲಾಕ್, ವೈ. ರಾಮಚಂದ್ರ ರಸ್ತೆ, ಗಾಂಧಿನಗರ, ಬೆಂಗಳೂರು-560009-**ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.**
2. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ಸಂಯೋಜನಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
4. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮಾನಸಗಂಗೋತ್ರಿ, ಮೈಸೂರು-**ಇವರಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಗಮನಕ್ಕೆ ತರುವುದು.**
7. ಸಂಯೋಜಕರು, ಐ.ಸಿ.ಡಿ, ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-**ಇವರಿಗೆ ವಿ.ವಿ. ಸುತ್ತೋಲೆಯನ್ನು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.**
8. ಮಾನ್ಯ ಕುಲಪತಿಯವರ/ಕುಲಸಚಿವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಕಛೇರಿ ಪ್ರತಿ.